# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ:ತುವಿ:ಶೈವಿ:2023-24/1589 ದಿನಾಂಕ:20.07.2024

## :ಅಧಿಸೂಚನೆ:

ವಿಷಯ:-2024-25ನೇ ಶೈಕ್ಷಣಿಕ ಸಾಲಿಗೆ ಸ್ನಾತಕ ಪದವಿ ಕೋರ್ಸುಗಳಿಗೆ ಯುಯುಸಿಎಂಎಸ್ ಮೂಲಕ ಆನ್‌ಲೈನ್ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸುವ ಕುರಿತು.

ಉಲ್ಲೇಖ:-1)ಸರ್ಕಾರದ ಆದೇಶ ಸಂಖ್ಯೆ:ಇಡಿ:166 ಯುಎನ್‌ಇ 2023 ಬೆಂಗಳೂರು ದಿನಾಂಕ:08.05.2024.
2)ವಿಶ್ವವಿದ್ಯಾನಿಲಯದ ಸುತ್ತೋಲೆ ಸಂಖ್ಯೆ: ಸಂಖ್ಯೆ:ತುವಿ:ಶೈವಿ:ಪ್ರ.ಶು:2024-25/281 ದಿ:09.05.2024.
3)ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 20.07.2024.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ 2024-25ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ ಪದವಿ ಕೋರ್ಸುಗಳಿಗೆ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳು ಯುಯುಸಿಎಂಎಸ್ ಮೂಲಕ ಪ್ರಥಮ ಸೆಮಿಸ್ಟರ್‌ಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಈ ಕೆಳಕಂಡ ಕೋಷ್ಟಕದಲ್ಲಿ ತಿಳಿಸಿರುವಂತೆ ದಿನಾಂಕವನ್ನು ನಿಗದಿಪಡಿಸಲಾಗಿದೆ.

| ಕ್ರ.ಸಂ | ವಿವರ | ದಿನಾಂಕ |
|---|---|---|
| 1 | ಯುಯುಸಿಎಂಎಸ್ ಪೋರ್ಟಲ್‌ನಲ್ಲಿ ಪ್ರಥಮ ವರ್ಷದ ಪ್ರಥಮ ಸೆಮಿಸ್ಟರ್ ಪದವಿಗೆ ಅರ್ಜಿ ಸಲ್ಲಿಸುವ ದಿನಾಂಕ | 15.07.2024 ರಿಂದ |
| 2 | ದಂಡ/ ದಂಡ ಶುಲ್ಕವಿಲ್ಲದೆ ಪ್ರಥಮ ವರ್ಷದ ಪ್ರಥಮ ಸೆಮಿಸ್ಟರ್ ಪದವಿಗೆ ಪ್ರವೇಶ ಪಡೆಯಲು ಕೊನೆಯ ದಿನಾಂಕ | ಮುಂದಿನ ದಿನಗಳಲ್ಲಿ ತಿಳಿಸಲಾಗುವುದು. |

ಮುಂದುವರೆದಂತೆ, ಪ್ರಸ್ತುತ ಶೈಕ್ಷಣಿಕ ಸಾಲಿನಿಂದ ಉಲ್ಲೇಖ (01)ರ ಸರ್ಕಾರದ ಆದೇಶದಂತೆ ರಾಜ್ಯ ಶಿಕ್ಷಣ ನೀತಿ ಆಯೋಗದ ಮಧ್ಯಂತರ ಶಿಫಾರಸ್ಸುಗಳ ಅನುಷ್ಠಾನ ಮಾರ್ಗಸೂಚಿಗಳನ್ನು ವಿಶ್ವವಿದ್ಯಾನಿಲಯವು ಯಥಾವತ್ತಾಗಿ ಜಾರಿಗೊಳಿಸಲಾಗಿರುತ್ತದೆ.

ವಿ.ಸೂ : ವಿದ್ಯಾರ್ಥಿಗಳು ಕಾಲೇಜಿನಲ್ಲಿ ಆಫ್‌ಲೈನ್ ಮೂಲಕ ಶುಲ್ಕ ಪಾವತಿಸಿರುವ ರಸೀದಿಯನ್ನು ಯುಯುಸಿಎಂಎಸ್‌ನಲ್ಲಿ ಅಪಲೋಡ್ ಮಾಡತಕ್ಕದ್ದು.
ಯಾವುದೇ ಕಾರಣಕ್ಕೂ ಶುಲ್ಕವನ್ನು ಯುಯುಸಿಎಂಎಸ್ ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಪಾವತಿಸುವಂತಿಲ್ಲ.

ಆದೇಶದ ಮೇರೆಗೆ,
20/07/24
ಉಪಕುಲಸಚಿವರು
ಉಪಕುಲ ಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

1. ಎಲ್ಲಾ ಪ್ರಾಂಶುಪಾಲರುಗಳು ಘಟಕ ಹಾಗೂ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ಎಲ್ಲಾ ಪ್ರಾಂಶುಪಾಲರುಗಳಿಗೆ ಇಂದೇ ಇ-ಮೂಲಕ ಕಳುಹಿಸುವುದು ಹಾಗೂ ವೆಬ್‌ಸೈಟ್‌ನಲ್ಲಿ ಇಂದೇ ಪ್ರಕಟಿಸುವುದು.

ಪ್ರತಿಗಳು:

1. ಕುಲಸಚಿವರು (ಮೌಲ್ಯಮಾಪನ) ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ನೋಡಲ್ ಅಧಿಕಾರಿಗಳು, ಯುಯುಸಿಎಂಎಸ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಛೇರಿ ಪ್ರತಿ.